**Akashvani: Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**21.05.2026: 14.30hrs**

*********

**ಮುಖ್ಯಾಂಶಗಳು :**

1. ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆ ಕಡಿತವಿಲ್ಲ - ರಾಜ್ಯ ಸರ್ಕಾರ ಸ್ಪಷ್ಟನೆ
2. ಮೇಕೆದಾಟು ಯೋಜನೆಗೆ ಹೊಸ ಡಿಪಿಆರ್, ಕೇಂದ್ರ ಸರ್ಕಾರ ಅನುಮತಿ ನೀಡಿದ ಬಳಿಕ ಭೂಮಿಪೂಜೆ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
3. ಭಯೋತ್ಪಾದನಾ ವಿರೋಧಿ ದಿನ; ವಿಧಾನಸೌಧದಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಜ್ಞಾವಿಧಿ ಬೋಧನೆ
4. ಬೆಂಗಳೂರಿನ ಸುರಕ್ಷತೆಗಿಂತ ರಿಯಲ್ ಎಸ್ಟೇಟ್ ಬಗ್ಗೆ ಸರ್ಕಾರಕ್ಕೆ ಒಲವು - ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪ

***********

ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆಯನ್ನು ಕಡಿತ ಮಾಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ತೆರಿಗೆ ಏರಿಸಿದರೆ ನಾವು ಕಡಿಮೆ ಮಾಡಬೇಕಾ ಎಂದು ಪ್ರಶ್ನಿಸಿದ್ದಾರೆ. ಇದೇ ವೇಳೆ ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಅವರು, ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ, ಪೆಟ್ರೋಲ್ ೭೦ ರೂಪಾಯಿ, ಡೀಸೆಲ್ ೪೮ ರೂಪಾಯಿ ಇತ್ತು. ಅಡುಗೆ ಅನಿಲ ಬೆಲೆ ೪೧೪ ರೂಪಾಯಿ ಇತ್ತು. ಪ್ರಧಾನಿ ನರೇಂದ್ರ ಮೋದಿ ಅವರು ಅಧಿಕಾರಕ್ಕೆ ಬಂದ ಬಳಿಕ ಪೆಟ್ರೋಲಿಯಂ ಉತ್ಪನ್ನಗಳ ಬೆಲೆ ಏರಿಕೆಯಾಗಿವೆ ಎಂದು ತಿಳಿಸಿದ್ದಾರೆ.

***********

ಮೇಕೆದಾಟು ವಿಚಾರದಲ್ಲಿ ತಮಿಳುನಾಡಿಗೆ ಯಾವುದೇ ತರಹದ ಹಕ್ಕಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಕೊಳ್ಳೇಗಾಲ ತಾಲೂಕಿನ ಶಿವನಸಮುದ್ರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮೇಕೆದಾಟಿಗೆ ಡಿಪಿಆರ್ ಸಿದ್ಧಮಾಡಲಾಗುತ್ತಿದೆ. ಆ ಜಾಗವನ್ನು ಗುರುತು ಮಾಡಿ ಬದಲಿ ಜಾಗವನ್ನು ನೀಡಲಾಗುವುದು ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರ ಅನುಮತಿ ನೀಡಿದ ಮೇಲೆ ಭೂಮಿ ಪೂಜೆ

ನೆರವೇರಿಸಲಾಗುವುದು ಎಂದು ತಿಳಿಸಿದ್ದಾರೆ. ಚಾಮರಾಜನಗರ ಐತಿಹಾಸಿಕ ಜಿಲ್ಲೆಯಾಗಿದ್ದು, ಧಾರ್ಮಿಕ ಪ್ರದೇಶದ ಪುಣ್ಯ ಭೂಮಿ ಎಂದು ಬಣ್ಣಿಸಿದ್ದಾರೆ.

***********

ಇಂದು ಭಯೋತ್ಪಾದನಾ ವಿರೋಧಿ ದಿನ. ಮಾಜಿ ಪ್ರಧಾನಿ ರಾಜೀವ್ ಗಾಂಧಿಯವರ ಹುತಾತ್ಮ ದಿನದ ಅಂಗವಾಗಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಭಯೋತ್ಪಾದನಾ ವಿರೋಧಿ ದಿನ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಗೃಹ ಸಚಿವ ಡಾ ಜಿ.ಪರಮೇಶ್ವರ್, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಎ.ಎಸ್.ಪೊನ್ನಣ್ಣ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ ಶಾಲಿನಿ ರಜನೀಶ್ ಸೇರಿದಂತೆ ಸಚಿವಾಲಯದ ಸಿಬ್ಬಂದಿ ಹಾಜರಿದ್ದರು. ದ್ವೇಷ, ಹಿಂಸಾಚಾರ ಮತ್ತು ಉಗ್ರವಾದದ ವಿರುದ್ಧ ಒಗ್ಗಟ್ಟಿನಿಂದ ನಿಲ್ಲುವ ಮಹತ್ವವನ್ನು ನಾವು ಇಂದು ಒತ್ತಿ ಹೇಳಬೇಕಾದ ಅಗತ್ಯವಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ರಾಷ್ಟ್ರೀಯ ಭಯೋತ್ಪಾದನಾ ವಿರೋಧಿ ದಿನದ ಅಂಗವಾಗಿ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ಅವರು, ಶಾಂತಿ ಮತ್ತು ಸಾಮಾಜಿಕ ಸಾಮರಸ್ಯವು ಪ್ರಗತಿಪರ ಮತ್ತು ಸುರಕ್ಷಿತ ರಾಷ್ಟ್ರದ ಬಲವಾದ ಆಧಾರ ಸ್ತಂಭಗಳಾಗಿವೆ. ಭಾರತದ ಏಕತೆ ಮತ್ತು ಸ್ಥಿತಿಸ್ಥಾಪಕತ್ವದ ನಿರಂತರ ಮನೋಭಾವವು ಸಮಾಜವನ್ನು ವಿಭಜಿಸಲು ಪ್ರಯತ್ನಿಸುವ ಶಕ್ತಿಗಳ ಮೇಲೆ ಜಯ ಗಳಿಸುತ್ತಲೇ ಇದೆ ಎಂದು ಹೇಳಿದ್ದಾರೆ.

***********

ಭಯೋತ್ಪಾದನಾ ವಿರೋಧಿ ದಿನದ ಅಂಗವಾಗಿ ಕೊಪ್ಪಳ ಜಿಲ್ಲಾಡಳಿತದ ವತಿಯಿಂದ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮ ನಡೆಯಿತು. ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ, ಪ್ರಮಾಣ ವಚನ ಬೋಧಿಸಿದರು. ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಿಲ್ಲಾ ಖಜಾನಾಧಿಕಾರಿಗಳಾದ ಕೆ.ಸುರೇಶ್ ಸೇರಿದಂತೆ ವಿವಿಧ ಇಲಾಖೆಗಳ ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ಇದೇ ಸಂದರ್ಭದಲ್ಲಿ ಉಪಸ್ಥಿತರಿದ್ದರು.

***********

ನೀಟ್ ಪರೀಕ್ಷೆಯಲ್ಲಿನ ಅಕ್ರಮಗಳನ್ನು ಖಂಡಿಸಿ, ಯುವ ಕಾಂಗ್ರೆಸ್ ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿತು. ದೇಶಾದ್ಯಂತ ನೀಟ್ ಪರೀಕ್ಷ ಪ್ರಶ್ನೆಪತ್ರಿಕೆ ಸೋರಿಕೆ, ಅಕ್ರಮಗಳು ಮತ್ತು ಹಗರಣಗಳ ಹಿನ್ನೆಲೆಯಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ನೀಟ್

ಪರೀಕ್ಷೆಗಳನ್ನು ರದ್ದುಗೊಳಿಸುವಂತೆ ಹಾಗೂ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಪ್ರತಿಭಟನಾಕಾರರು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಭಾಗಿಯಾದ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಯುವ ಕಾಂಗ್ರೆಸ್ ರಾಜಭವನ ಚಲೋ ಹಮ್ಮಿಕೊಂಡಿದ್ದು, ಬಿಗಿ ಭದ್ರತೆ ಏರ್ಪಡಿಸಲಾಗಿದೆ.

***********

ರಾಜ್ಯದ ಪ್ರತಿಯೊಂದು ಇಲಾಖೆಯಲ್ಲೂ ಭ್ರಷ್ಟಾಚಾರ ಹೆಚ್ಚಾಗಿದ್ದು, ಕರ್ನಾಟಕ ಭ್ರಷ್ಟಾಚಾರದ ಪಟ್ಟಿಯಲ್ಲಿ ಐದನೆಯ ಸ್ಥಾನ ಪಡೆದಿದೆ. ಈ ಪಿಡುಗನ್ನು ತಡೆಯದೇ ಹೋದಲ್ಲಿ ಭವಿಷ್ಯದಲ್ಲಿ ಭೀಕರ ಅಪಾಯ ಕಟ್ಟಿಟ್ಟ ಬುತ್ತಿ ಎಂದು ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಎಚ್ಚರಿಕೆ ನೀಡಿದ್ದಾರೆ. ಮಳವಳ್ಳಿ ತಾಲ್ಲೂಕಿನಲ್ಲಿ ಬಾಕಿ ಇರುವ ಪ್ರಕರಣಗಳ ವಿಚಾರಣೆ ಮತ್ತು ವಿಲೇವಾರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಪೂರ್ಣ ಪ್ರಮಾಣದ ಪ್ರಕರಣಗಳನ್ನು ಅಧಿಕಾರಿಗಳು ವಿಲೇವಾರಿ ಮಾಡಲು ಸಾಧ್ಯವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅಂಬೇಡ್ಕರ್ ಅವರು ದೇಶಕ್ಕೆ ಬಲಿಷ್ಠವಾದ ಸಂವಿಧಾನವನ್ನು ನೀಡಿದ್ದು, ಎಲ್ಲಾ ಅಧಿಕಾರಿಗಳು ಸಂವಿಧಾನ ಬದ್ಧವಾಗಿ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದ್ದಾರೆ.

***********

ಬೆಂಗಳೂರಿನ ಸುರಕ್ಷತೆ ಮತ್ತು ಕಾನೂನು ಸುವ್ಯವಸ್ಥೆಯನ್ನು ಖಚಿತಪಡಿಸಿಕೊಳ್ಳುವ ಬದಲು, ರಾಜ್ಯ ಸರ್ಕಾರ, ರಿಯಲ್ ಎಸ್ಟೇಟ್ ಅಭಿವೃದ್ಧಿಪಡಿಸಲು ಹೆಚ್ಚು ಆಸಕ್ತಿವಹಿಸಿದೆ ಎಂದು ಪ್ರತಿಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಬೆಂಗಳೂರಿನ ಸುತ್ತಮುತ್ತಲಿನ ಪ್ರದೇಶಗಳನ್ನು ಅಭಿವೃದ್ಧಿಪಡಿಸುವಲ್ಲಿ ತೋರಿಸಿರುವ ಆಸಕ್ತಿಯನ್ನು ಸಾರ್ವಜನಿಕ ಸುರಕ್ಷತೆಗೆ ತೋರಿಸಿದ್ದರೆ ಬೆಂಗಳೂರು ಅಪರಾಧಗಳ ನಗರವಾಗುತ್ತಿರಲಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನಲ್ಲಿ ಹಿರಿಯ ನಾಗರಿಕರು ಸುರಕ್ಷಿತವಾಗಿಲ್ಲ, ಬಾಲಾಪರಾಧ ಪ್ರಕರಣಗಳ ಸಂಖ್ಯೆಯೂ ಹೆಚ್ಚಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಈ ಸರ್ಕಾರ ಅಧಿಕಾರದಲ್ಲಿ ಮುಂದುವರಿಯುವ ನೈತಿಕ ಹಕ್ಕನ್ನು ಕಳೆದುಕೊಂಡಿದೆ ಎಂದು ದೂರಿದ್ದಾರೆ.

***********

ದ್ವಿತೀಯ ಪಿಯುಸಿ ಪರೀಕ್ಷೆ-೨ರ ಫಲಿತಾಂಶವನ್ನು ಶಾಲಾ ಪರೀಕ್ಷಾ ಮತ್ತು ಮೌಲ್ಯ ನಿರ್ಣಯ ಮಂಡಳಿ ಇಂದು ಪ್ರಕಟಿಸಿದೆ.

ವಿದ್ಯಾರ್ಥಿಗಳು ಫಲಿತಾಂಶವನ್ನು karresults.nic.in ಅಥವಾ karnatakaone ಅಪ್ಲಿಕೇಶನ್ ಮೂಲಕ ಪರಿಶೀಲಿಸಬಹುದಾಗಿದೆ.

***********

ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ತಡೆ ಕಾಯ್ದೆ ೨೦೧೩ರನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಜಿಲ್ಲೆಯ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಸಂಸ್ಥೆಗಳು ಆಂತರಿಕ ದೂರು ನಿವಾರಣಾ ಸಮಿತಿಗಳನ್ನು ಕಡ್ಡಾಯವಾಗಿ ರಚಿಸಬೇಕು ಎಂದು ಬಳ್ಳಾರಿಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ ತಿಳಿಸಿದ್ದಾರೆ. ಸಮಿತಿಗಳಲ್ಲಿ ದಾಖಲಾಗಿರುವ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಬೇಕು ಎಂದು ಸೂಚನೆ ನೀಡಿದ್ದಾರೆ. ಜೂನ್ ೯ರ ಒಳಗಾಗಿ ಈ ಕುರಿತಾದ ಮಾಹಿತಿಯನ್ನು ಕೇಂದ್ರ ಸರ್ಕಾರದ 'ಶೀ-ಬಾಕ್ಸ್' ಪೋರ್ಟಲ್‌ನಲ್ಲಿ ನೋಂದಣಿ ಮಾಡದಿದ್ದರೆ ೫೦ ಸಾವಿರ ರೂಪಾಯಿ ದಂಡ ವಿಧಿಸುವುದರ ಜೊತೆಗೆ, ಖಾಸಗಿ ಕಚೇರಿಗಳ ಪರವಾನಗಿ ರದ್ದು ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ

***********

ಕೋಲಾರದಲ್ಲಿ ಮನೆಗಳಿಂದ ಸಂಗ್ರಹಿಸುವ ಕಸವನ್ನು ಮೂಲದಲ್ಲೇ ವಿಂಗಡಣೆ ಮಾಡದಿದ್ದರೆ ಪೌರಕಾರ್ಮಿಕರು ಅಂತಹ ಕಸವನ್ನು ಸ್ವೀಕರಿಸಬಾರದು ಎಂದು ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಸೂಚನೆ ನೀಡಿದ್ದಾರೆ. ರಾಜ್ಯದಲ್ಲಿ ಘನತ್ಯಾಜ್ಯ ವಿಲೇವಾರಿ ನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವ ಹಾಗೂ ಸುಪ್ರೀಂಕೋರ್ಟ್ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸುವ ನಿಟ್ಟಿನಲ್ಲಿ ಉನ್ನತ ಮಟ್ಟದ ಪ್ರಗತಿ ಪರಿಶೀಲನಾ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಈ ಕೆಲಸದಲ್ಲಿ ನಿರ್ಲಕ್ಷ್ಯ ತೋರಿದರೆ ತಿಂಗಳ ವೇತನವನ್ನು ತಕ್ಷಣವೇ ತಡೆಹಿಡಿಯುವುದಾಗಿ ತಿಳಿಸಿದ್ದಾರೆ. ಸುಪ್ರೀಂಕೋರ್ಟ್ ನಿರ್ದೇಶನದಂತೆ ಇನ್ನು ಮುಂದೆ ಕಡ್ಡಾಯವಾಗಿ ನಾಲ್ಕು ಹಂತಗಳಲ್ಲಿ ಕಸ ವಿಂಗಡಣೆ ಮಾಡಬೇಕು. ಹಸಿಕಸ, ಒಣಕಸ, ಸ್ಯಾನಿಟರಿ ಕಸ ಮತ್ತು ವಿಶೇಷ ಕಾಳಜಿಯ ಕಸ ಎಂದು ಪ್ರತ್ಯೇಕಿಸಬೇಕು ಎಂದು ಸಲಹೆ ನೀಡಿದ್ದಾರೆ.

***********

ತೋಟಗಾರಿಕೆ ಇಲಾಖೆ ವತಿಯಿಂದ ಕೊಪ್ಪಳದಲ್ಲಿ ಹಮ್ಮಿಕೊಳ್ಳಲಾದ ೨೦೨೪-೨೫ನೇ ಸಾಲಿನ ೧೦ನೇ ವರ್ಷದ ಮಾವು ಮಾರಾಟ ಮೇಳವನ್ನು ಇನ್ನೂ ೫ ದಿನಗಳ ಕಾಲ ಮುಂದುವರಿಸಲಾಗುವುದು ಎಂದು ತೋಟಗಾರಿಕೆ ಜಂಟಿ ನಿರ್ದೇಶಕರಾದ ಕೃಷ್ಣ ಸಿ. ಉಕ್ಕುಂದ

ತಿಳಿಸಿದ್ದಾರೆ. ರೈತರು ಹಾಗೂ ಗ್ರಾಹಕರ ಒತ್ತಾಯದ ಮೇರೆಗೆ ಮಾವು ಮಾರಾಟ ಮೇಳವನ್ನು ಇನ್ನೂ ೫ ದಿನಗಳ ಕಾಲ ಮುಂದುವರೆಸಲಾಗಿದೆ. ರೈತರು ಹಾಗೂ ಜಿಲ್ಲೆಯ ಗ್ರಾಹಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ತೋಟಗಾರಿಕೆ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

***********

ಬಳ್ಳಾರಿ ಜಿಲ್ಲಾಡಳಿತ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಗೃಹರಕ್ಷಕ ದಳ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯಿಂದ ತಾಲ್ಲೂಕಿನ ಅಮರಾಪುರ ಗ್ರಾಮದಲ್ಲಿ ವಿಪತ್ತು ನಿರ್ವಹಣೆ ಕುರಿತು ಅಣಕು ಪ್ರದರ್ಶನ ನಡೆಯಿತು. ಗಾಯಗೊಂಡವರನ್ನು ತಕ್ಷಣ ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿ ಪ್ರಥಮ ಚಿಕಿತ್ಸೆ ನೀಡುವುದು, ಕಾನೂನು ಸುವ್ಯವಸ್ಥೆ ಕಾಪಾಡುವುದು ಮತ್ತು ಆರೋಗ್ಯ ದೃಷ್ಟಿಯಿಂದ ಕೈಗೊಳ್ಳಬೇಕಾದ ತುರ್ತು ಕ್ರಮಗಳ ಬಗ್ಗೆ ಪ್ರಾಯೋಗಿಕವಾಗಿ ಪ್ರದರ್ಶಿಸಲಾಯಿತು. ಈ ವೇಳೆ ಮಾತನಾಡಿದ ಬಳ್ಳಾರಿ ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಡಿಎಸ್ಪಿ ಜಿ.ಎಂ. ತಿಪ್ಪೇಸ್ವಾಮಿ, ಕಡಿಮೆ ಸಮಯದಲ್ಲಿ, ಕನಿಷ್ಠ ನಷ್ಟದೊಂದಿಗೆ ಜನರನ್ನು ರಕ್ಷಿಸುವುದು ಅಣಕು ಪ್ರದರ್ಶನದ ಮುಖ್ಯ ಉದ್ದೇಶವಾಗಿದೆ. ವಿಪತ್ತು ಸಂದರ್ಭದಲ್ಲಿ ಸಂದರ್ಭದಲ್ಲಿ ತ್ವರಿತ ಕಾರ್ಯಾಚರಣೆ ಮತ್ತು ಇಲಾಖೆಗಳ ಸಮನ್ವಯತೆಯೂ ಅಗತ್ಯ ಎಂದು ತಿಳಿಸಿದ್ದಾರೆ. ಇದು ಕೇವಲ ಒಂದು ತಾಲೀಮು ಅಲ್ಲ, ದೇಶದ ರಕ್ಷಣೆ ಮತ್ತು ಭವಿಷ್ಯಕ್ಕೆ ಭದ್ರವಾದ ಅಡಿಪಾಯವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

*****END******